ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:-ಸಿ1(4)ವರ್ಗಾವಣೆ: 131/2012-13 ದಿನಾಂಕ: 07-06-2013

<u>ಅಧಿಕೃತ ಜ್ಞಾಪನ</u>

ವಿಷಯ:-2013ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ ಮಾರ್ಗಸೂಚಿ.

ಉಲ್ಲೇಖ:-1.ಈ ಕಛೇರಿಯ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿನಾಂಕ: 04.06.2013

-*****-

ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳ ವರ್ಗಾವಣೆಗಳನ್ನು 2013ಕ್ಕೆ ಸೀಮಿತಗೊಳಿಸಿ ಜೂನ್/ಜುಲೈ ತಿಂಗಳಲ್ಲಿ ನಡೆಸಲು On Line ಮೂಲಕ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಮತ್ತು ವರ್ಗಾವಣೆ ಪ್ರಕ್ರಿಯೆಗೆ ವೇಳಾಪಟ್ಟಿ ಹಾಗೂ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ.

1. **<u>ಒಂದು ಜೇಷ್ಠತಾ ಘಟಕದಿಂದ ಇನ್ನೊಂದು ಜೆಷ್ಠತಾ ಘಟಕದ ವರ್ಗಾವಣೆಗೆ On Line ನಲ್ಲಿ ಅರ್ಜಿ ಸಲ್ಲಿಸುವುದು:-</u>** ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರು, ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪಪ್ರಾಂಶುಪಾಲರು, ಡಯಟ್/ಟಿಟಿಐ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರ ವೃಂದದ ಉಪನ್ಯಾಸಕರು ಹಾಗು ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳು ಕೋರಿಕೆ ಮೇಲೆ ಒಂದು ಜೇಷ್ಠತಾ ಘಟಕದಿಂದ ಇನ್ನೊಂದು ಜೆಷ್ಠತಾ ಘಟಕಕ್ಕೆ ವರ್ಗಾವಣೆಗೆ ಅರ್ಜಿ ಸಲ್ಲಿಸುವುದಾದಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಶಿಕ್ಷಕರ ವರ್ಗಾವಣೆ ನಿಯಂತ್ರಣ ಅಧಿನಿಯಮ 2007ರ ಸೆಕ್ಷನ್ 6(1)ರ ನಿಬಂಧನೆಗೆ ಒಳಪಟ್ಟು ಮತ್ತು ಸೆಕ್ಷನ್ 6(2)ರ (1) (2) (3) (4) ರಲ್ಲಿನ ಅವಕಾಶದಂತೆ ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ On Line ನಲ್ಲಿ ಮಾತ್ರ ಅರ್ಜಿಯನ್ನು ಭರ್ತಿ ಮಾಡಬೇಕು. ಮತ್ತು ಅರ್ಜಿ ಸಲ್ಲಿಸಿದ ಒಂದು ದಿನದ ಒಳಗಾಗಿ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಕಛೇರಿಗೆ ಸೇವಾ ಮಾಹಿತಿ ಪರಿಶೀಲನೆಗೆ ಖುದ್ದಾಗಿ ಹಾಜರಾಗತಕ್ಕದ್ದು. ಈ ರೀತಿ ಸಲ್ಲಿಸಿದ ಅರ್ಜಿಗಳನ್ನು ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಈಗಾಗಲೇ ತಿಳಿಸಿರುವ ಸೂಚನೆಗಳ ಪ್ರಕಾರ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ತಿಳಿಸಿದೆ.

10-06-13

(ಕೆ.ಪಿ. ಹನುಮಂತರಾಯಪ್ಪ)
ಅಪರ ಆಯುಕ್ತರು (ಆಡಳಿತ)
(ಹೆಚ್ಚುವರಿ ಪ್ರಭಾರ)

ಗೆ,

ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ

ಪ್ರತಿಯನ್ನು:-

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
7. ಕಛೇರಿ ಪ್ರತಿ.